# ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಹನ್ನೊಂದನೇ ಅಧಿವೇಶನ)

## ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 13ನೇ ಡಿಸೆಂಬರ್, 2011

(ಸಮಯ: ಬೆಳಿಗ್ಗೆ 11.00 ಗಂಟೆಗೆ)

– – –

## 1. ಪ್ರಶ್ನೋತ್ತರ

| | | |
|---|---|---|
| ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಆರನೇ ಪಟ್ಟಿ |
| ಆ) ದಿನಾಂಕ 09.12.2011ರ ನಾಲ್ಕನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 48(22) | : | ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು. |
| ಇ) ದಿನಾಂಕ 09.12.2011ರ ನಾಲ್ಕನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಆರ್. ನರೇಂದ್ರ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 58(111) | : | ಲೋಕೋಪಯೋಗಿ ಸಚಿವರು. |
| ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಆರನೇ ಪಟ್ಟಿ |

## 2. ವರದಿಯನ್ನೊಪ್ಪಿಸುವುದು

ಶ್ರೀ ಎನ್. ಯೋಗೀಶ್ ಭಟ್, ವಿಧಾನಸಭೆಯ ಉಪಸಭಾಧ್ಯಕ್ಷರು ಹಾಗೂ 2010–11ನೇ ಸಾಲಿನ ಅರ್ಜಿಗಳ ಸಮಿತಿಯ ಅಧ್ಯಕ್ಷರು, ಸಮಿತಿಯ ಹತ್ತನೇ ವರದಿಯನ್ನು ಮಂಡಿಸುವುದು.

## 3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಡಿ.ವಿ.ಸದಾನಂದ ಗೌಡ (ಮಾನ್ಯ ಮುಖ್ಯಮಂತ್ರಿಯವರು) ಅವರು, 2011–12ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯವಾರ್ಷಿಕ ಪರಿಶೀಲನೆಯನ್ನು ಮಂಡಿಸುವುದು.

ಮು.ತಿ.ನೋ.

## 4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರಾದ ಸಿದ್ದರಾಮಯ್ಯ, ಟಿ.ಬಿ. ಜಯಚಂದ್ರ, ಸಿ.ಎಸ್.ನಾಡಗೌಡ, ಕೆ.ಅಭಯಚಂದ್ರ, ಕಿಮ್ಮನೆ ರತ್ನಾಕರ ಹಾಗೂ ಇತರರು ರಾಜ್ಯದ 100 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಸರ್ಕಾರ ಇತ್ತೀಚೆಗೆ ಘೋಷಣೆ ಮಾಡಿದ್ದು, ಬರಪರಿಹಾರ ಕಾಮಗಾರಿಗಳನ್ನು ಸಮರೋಪಾದಿಯಲ್ಲಿ ಕೈಗೊಳ್ಳುವ ಬಗ್ಗೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

## 5. ಶಾಸನ ರಚನೆ

### I. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**1) ಕರ್ನಾಟಕ ನಾಗರಿಕರಿಗೆ ಸೇವೆಗಳ ಖಾತರಿ ವಿಧೇಯಕ, 2011**
**ಶ್ರೀ ಡಿ.ವಿ.ಸದಾನಂದಗೌಡ, (ಮುಖ್ಯಮಂತ್ರಿಯವರು) ಅವರು:-**

ಅ) 2011ನೇ ಸಾಲಿನ ಕರ್ನಾಟಕ ನಾಗರಿಕರಿಗೆ ಸೇವೆಗಳ ಖಾತರಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**2) ಕರ್ನಾಟಕ ಅರಣ್ಯ (ತಿದ್ದುಪಡಿ)ವಿಧೇಯಕ, 2011**
**ಶ್ರೀ ಸಿ.ಪಿ.ಯೋಗೇಶ್ವರ (ಅರಣ್ಯ ಸಚಿವರು)ಅವರು:-**

ಅ) 2011ನೇ ಸಾಲಿನ ಕರ್ನಾಟಕ ಸೇವೆಗಳ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**3) ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕ, 2011**
**ಶ್ರೀ ಜೆ.ಕೃಷ್ಣ ಪಾಲೆಮಾರ್ (ಬಂದರು ಮತ್ತು ಒಳನಾಡು ಜಲಸಾರಿಗೆ, ಜೀವಶಾಸ್ತ್ರ ಮತ್ತು ಪರಿಸರ, ಸಚಿವರು)ಅವರು:-**

ಅ) 2011ನೇ ಸಾಲಿನ ಕರ್ನಾಟಕ ಜಲಸಾರಿಗೆ ಮಂಡಳಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**4) ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ (ಕ್ರಷರ್‌ಗಳ) ನಿಯಂತ್ರಣ ವಿಧೇಯಕ, 2011**
**ಶ್ರೀ ಡಿ.ವಿ.ಸದಾನಂದ ಗೌಡ (ಮುಖ್ಯಮಂತ್ರಿಯವರು) ಅವರು:-**

ಅ) 2011ನೇ ಸಾಲಿನ ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ(ಕ್ರಷರ್‌ಗಳ) ನಿಯಂತ್ರಣ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಮು.ತಿ.ನೋ.

## 6. ಗಮನ ಸೆಳೆಯುವ ಸೂಚನೆ

1. ಶ್ರೀ ಹೆಚ್.ಎಸ್. ಪ್ರಕಾಶ್ ಅವರು ಹಾಸನ ನಗರದಲ್ಲಿ ಹಿಂದುಳಿದ ವರ್ಗಗಳ ಪದವಿ ಪೂರ್ವ ಕಾಲೇಜು ಪ್ರಥಮ ದರ್ಜೆ ಕಾಲೇಜು, ಮೆಡಿಕಲ್,ಇಂಜಿನಿಯರಿಂಗ್, ಮುಂತಾದ ಕಾಲೇಜುಗಳಿದ್ದು ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಈಗಿರುವ ವಿದ್ಯಾರ್ಥಿನಿಲಯಗಳಿಗೆ ಹೆಚ್ಚುವರಿ ಸೀಟುಗಳನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

2. ಶ್ರೀ ನೆ.ಲ. ನರೇಂದ್ರ ಬಾಬು ಅವರು ಬೆಂಗಳೂರು ನಗರ ವಲಯ ಮತ್ತು ಗ್ರಾಮೀಣ ವಲಯ ಪ್ರದೇಶಗಳಲ್ಲಿ ಕೈಗಾರಿಕಾ ಸ್ಥಾಪನೆಗೆ ಸರ್ಕಾರ ವಶಪಡಿಸಿಕೊಂಡಿರುವ ಹಾಗೂ ಈರೀತಿ ವಶಪಡಿಸಿಕೊಂಡಿರುವ ಜಮೀನುಗಳ ಪೈಕಿ ಜಮೀನುಗಳ ಡಿ- ನೋಟಿಫೈ ಮಾಡಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

3. ಶ್ರೀ ಹೆಚ್.ಹಾಲಪ್ಪ ಅವರು ರಾಜ್ಯದ ಮಲೆನಾಡು ಪ್ರದೇಶವಾದ ಸೊರಬ ಹಾಗೂ ಸಾಗರ ತಾಲ್ಲೂಕಿನಲ್ಲಿ ಖಾಸಗಿ ಜಮೀನಿನಲ್ಲಿ ಜಂಬಿಟ್ಟಿಗೆ/ಜಲ್ಲಿ/ಕಲ್ಲು/ ಮರಳು ತೆಗೆಯುವುದನ್ನು ಕರ್ನಾಟಕ ರಾಜ್ಯ ಉಪ ಖನಿಜ ನಿಯಮ 1994ರ ಅಡಿಯಲ್ಲಿ ಗೃಹೋಪಯೋಗಿ ಬಳಕೆ ಕಲ್ಲನ್ನು ಗಣಿ ಮತ್ತು ಮೈನಿಂಗ್‌ಗೆ ಸೇರಿಸಿರುವುದರಿಂದ ಸಾವಿರಾರು ಕಾರ್ಮಿಕರಿಗೆ ಅನಾನುಕೂಲವಾಗಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯುವುದು.

4. ಶ್ರೀ ಜೆ.ಡಿ. ನಾಯ್ಕ ಅವರು ದಿನಾಂಕ 11.02.2011ರಂದು ಸರ್ಕಾರದ ಕಾರ್ಯದರ್ಶಿಗಳು ಕಂದಾಯ ಇಲಾಖೆ ಒಂದು ಸುತ್ತೋಲೆ ಹೊರಡಿಸಿ ಬಾಕಿ ಪರಿಶೀಲನೆ ಕಾರ್ಯ ಮುಗಿಯುವವರೆಗೆ ಸಾಮಾಜಿಕ ಯೋಜನೆಗಳನ್ನು ಸ್ಥಗಿತಗೊಳಿಸಿರುವುದರಿಂದ ಭಟ್ಕಳ ಹಾಗೂ ಹೊನ್ನಾವರ ತಾಲ್ಲೂಕಿನಲ್ಲಿ ಹೊಸ ಮಂಜೂರಾತಿ ಕಾರ್ಯ ಪ್ರಾರಂಭಿಸಲು ಹಾಗೂ ಬಾಕಿ ಇದ್ದ ಪ್ರಕರಣಗಳನ್ನು ಇತ್ಯರ್ಥಗೊಳಿಸಲು ತೊಂದರೆಯಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5. ಶ್ರೀ ಪ್ರಕಾಶ್ ಹುಕ್ಕೇರಿ ಅವರು ಬೆಳಗಾವಿ ಜಿಲ್ಲೆ ಚಿಕ್ಕೋಡಿ-ಸದಲಗ ವ್ಯಾಪ್ತಿಯ ಬೈನಕಾವಾಡಿ, ಜೋಡಕುರುಳಿ, ಚಿಂಚಣಿ, ಪಟ್ಟಣಕೂಡಿ ಹಾಗೂ ಹಾಲಟ್ಟಿ ಕೆರೆಗಳನ್ನು ಅಭಿವೃದ್ಧಿಪಡಿಸಲು ನೀಡಿರುವ ಅನುದಾನದ ವೆಚ್ಚದ ಪ್ರಮಾಣಕ್ಕೆ ಸರಿಯಾಗಿ ಕೆರೆಗಳ ಅಭಿವೃದ್ಧಿ ಕಾಮಗಾರಿ ನಡೆಯದಿರುವ ಬಗ್ಗೆ ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.

6. ಶ್ರೀ ಡಿ.ಕೆ.ಶಿವಕುಮಾರ್ ಅವರು ರಾಮನಗರ ಜಿಲ್ಲೆಯ ಕನಕಪುರ ತಾಲ್ಲೂಕಿನ, ಅರ್ಕಾವತಿ ಜಲಾಶಯದಲ್ಲಿ ಮೀನು ಪಾಶ್ವಾರು ಹಕ್ಕನ್ನು ಶ್ರೀ ಅರ್ಕಾವತಿ ಮೀನುಗಾರರ ಸಹಕಾರ ಸಂಘ ಪಡೆದಿದ್ದು 2011-12ನೇ ಸಾಲಿನಲ್ಲಿ ಸದರಿ ಸಂಘಕ್ಕೆ ಗುತ್ತಿಗೆ ತಪ್ಪಿಸುವ ದುರುದ್ದೇಶದಿಂದ ನಕಲಿ ಸಹಕಾರ ಸಂಘಕ್ಕೆ ಮೀನು ಪಾಶ್ವಾರು ಹಕ್ಕನ್ನು ನೀಡಿರುವ ಬಗ್ಗೆ ಮಾನ್ಯ ಮೀನುಗಾರಿಕೆ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು

7. ಶ್ರೀ ಹೆಚ್.ಡಿ. ರೇವಣ್ಣ ಮತ್ತು ಶ್ರೀ ಹೆಚ್. ಸಿ. ಬಾಲಕೃಷ್ಣ ಅವರುಗಳು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕ್ಯಾಂಪಸ್ ಅನ್ನು ನಿರ್ಮಿಸಲು ರಾಮನಗರ ತಾಲ್ಲೂಕಿನ ಅರ್ಚಕರಹಳ್ಳಿ 247 ಎಕರೆ ಪ್ರದೇಶ ಜಮೀನು ನೀಡಿ ಆಡಳಿತಾತ್ಮಕ ಮಂಜೂರಾತಿ ನೀಡಿದ್ದರೂ ಸರ್ಕಾರವು ವಿಶ್ವವಿದ್ಯಾಲಯದ ಕಾಮಗಾರಿಯನ್ನು ಕೈಗೊಳ್ಳದಿರುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 7. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರಾದ ಹೆಚ್.ಡಿ.ರೇವಣ್ಣ, ವೆಂಕಟರಾವ್ ನಾಡಗೌಡ, ಹಾಗೂ ಇತರರು, ರಾಜ್ಯದಲ್ಲಿ ರೈತರು ಬೆಳೆದ ಬೆಳೆಗಳಿಗೆ ಬೆಲೆ ಕುಸಿದಿರುವುದರಿಂದ ರೈತರು ಸಂಕಷ್ಟಕ್ಕೀಡಾಗಿರುವುದರಿಂದ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನಿಗದಿಪಡಿಸುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

2. ಶ್ರೀಯುತರಾದ ಸುನೀಲ ವಿ ಹೆಗಡೆ, ದಿನಕರ ಕೆ ಶೆಟ್ಟಿ, ಹಾಗೂ ಇತರರು ಉತ್ತರ ಕನ್ನಡ ಜಿಲ್ಲೆಯ ಕಾಳಿ ಜಲ ವಿದ್ಯುತ್ ಯೋಜನೆಯಿಂದ ಮುಳುಗಡೆಯಾದ ಜೋಯಿಡಾ ತಾಲ್ಲೂಕಿನ ಕಾಳಿ ನಿರಾಶ್ರಿತರಿಗೆ ಪುನರ್ ವಸತಿ ಕೇಂದ್ರವನ್ನು ಅಭಿವೃದ್ಧಿಪಡಿಸುವ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

## 8. ಅರ್ಧ ಗಂಟೆ ಕಾಲಾವಧಿ ಚರ್ಚೆ

1. ಶ್ರೀ ವಸಂತ ಬಂಗೇರ ಕೆ. ಅವರು ಅರಣ್ಯ ಇಲಾಖೆಗೆ ಒಳಪಟ್ಟ ಜಾಗಗಳು ಅತಿಕ್ರಮಣವಾಗಿರುವುದರ ಬಗ್ಗೆ ದಿನಾಂಕ 05.12.2011ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ 1ನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ 9(3)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2. ಶ್ರೀ ರಾಮಸ್ವಾಮಿಗೌಡ ಬಿ.ಬಿ ಅವರು ರೇಷ್ಮೆ ಬಿತ್ತನೆ ವಲಯದ ಮೇಲೆ ದುಷ್ಪರಿಣಾಮಗಳು ಉಂಟಾಗುವ ಸಾಧ್ಯತೆ ಬಗ್ಗೆ ದಿನಾಂಕ 05.12.2011ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ 1ನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ 8(119)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

**ಪಿ.ಓಂಪ್ರಕಾಶ**
ಕಾರ್ಯದರ್ಶಿ

*Raj N*

| |
|---|
| **ವಿಧಾನ ಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**<br>(www.kar.nic.in/kla) |